ಮೈಸೂರ ಗೆಜೆಟ್.

ನಂ. 48 ಸರ್ಕಾರದಿಂದ ಫಾಯಿಷ್ ಆದ್ದು. ಸನ್ 1887.

ಬೆಂಗಳೂರು, ಶನಿವಾರ, ಡಿಶಂಬರ್ ತಾ|| 3, ಸನ್ 1887.

☞ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜೀಯವರು, ಸರ್ವೇ ವ ಇನಾಂ ಸೂಪರ್ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫೀಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ಷ ಇನ್‌ಸ್ಪೆಕ್ಟರ್ ಜನರಲ್ಲವರು, ಅಂಚೇ ಬಕ್ಷೀರು, ಮ್ಯುನಿಸಿಪೆಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜೀರು, ಡಿ|| ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜೀರು, ಪೊಲೀಸ್ ಸೂಪರ್ಟೆಂಡೆಂಟರು, ಫಾರೆಸ್ಟು ಆಫೀಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತೀ ರಿಪೋರ್ಟುಗಳು; ಫೋಸ್ಟ್ಆಫೀಸ್ ನೋಟೀಸ್‌ಗಳು.

3ನೇ ಭಾಗ–ಶ್ರೀಮ್ಮ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟಆಕ್ಟುಗಳು ವ ರೆಗ್ಯುಲೇಷಣಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಇಸ್ತಿಹಾರ್‌ನಾಮೆಗಳು.

ತಾರೀಖು 5ನೇ ನವಂಬರ್ 1887.

ಕ್ಯಾಂಪ್ ನಂ. 1723.—ಇದರಿಂದ ಸರ್ವರ ತಿಳುವಳಿಕೇ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಈದೇಶದ ಅನೇಕ ಪ್ರಾಂತ್ಯಗಳಲ್ಲಿ ಮಾರಿಕಾ ಉಪದ್ರವ ಯಿನ್ನೂ ವ್ಯಾಪಿಸಿ ಯಿರುತ್ತದೆ; ಆದದರಿಂದ ಸಧ್ಯದಲ್ಲೇ ನಡಿಯುವ ಸುಬ್ರಹ್ಮಣ್ಯದ ಯಾತ್ರೆಗೋಸ್ಕರ ಹಾಸನ ಡಿಸ್ಟ್ರಿಕ್ಟು ಮೆಂಜಿರಾಬಾದ್ ತಾಲ್ಲೂಕು ಬಿಸಲೇಗೆ ಹೋಗಲಿಚ್ಛೈಉಳ್ಳವರು ಹಾಂಗೆ ಹೋಗುವದರಿಂದ ಸಂಭವಿಸಬಹುದಾದ ಅಪಾಯಕ್ಕೆ ವಳಗಾಗ ಬಾರದೆಂಬದಾಗಿ ಇದರಿಂದ ಯಚ್ಚರಿಸಲ್ಪಟ್ಟಿರುತ್ತಾರೆ.

ತಾರೀಖು 15ನೇ ನವೆಂಬರ್ 1887.

ಕ್ಯಾಂಪ್ ನಂ. 1799.—ಬೆಂಗಳೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ್ ಆಫೀಸ್ ರೆವಿನ್ಯೂ ಶಿರಸ್ತೇದಾರ್ ಮೆ|| ಯೆ. ಯಸ್. ರಾಘವಾಚಾರ್ಯಿಗೆ, ರಾಯಬಹದೂರ್ ಯೆ. ಶ್ರೀನಿವಾಸಾಚಾರ್ಯು ರಜಾದ ಮೇಲೆ ಯಿರುವ ಕಾಲದಲ್ಲಿ ಯಾ ಮತ್ತೊಂದು ಹುಕ್ಕುಂ ಕೊಡುವ ಪರಿಯಂತ ಬೆಂಗಳೂರು ಷಹರ್ ಮ್ಯುನಿಸಿಪಾಲಿಟಿ ಕಮ್ಮಿಷನ್ನಿನ ವೈಸ್ ಪ್ರೆಸಿಡೆಂಟರಾಗಿ ಆಕ್ಟಿಂಗ್ ತರೀಕ ಕೆಲಸನೋಡುವಂತೆ ಮೊಕರರ್ ಮಾಡಲ್ಪಟ್ಟಿರುತ್ತೆ.

ಕ್ಯಾಂಪ್ ನಂ. 1802.—1884ನೇ ಇಸವಿ ಡಿಸಂಬರ್ 6ನೇ ನಂಬರ್ಕುಂ 5063—107ನೇ ನಂಬರ್ ಉಳ್ಳ ದಿವಾನರವರ ಪ್ರೊಸೀಡಿಂಗ್ಸಿನ ಷರತ್ತುಗಳನುಸರಿಸಿ ಕೋಲಾರ್‌ಪೇಟೆ ತಾಲ್ಲೂಕು ಅಮಲ್ದಾರ್ ಶ್ರೀನಿವಾಸರಾಯರಿಗೆ, 1887ನೇ ಇಸವಿ ನವಂಬರ್ 21ನೇ ಮುಕ್ಕುಂ ಲಾಗಾಯತು ಯಾ ಅವರು ಉಪಯೋಗಿಸಿಕೊಂಡ ತಾರೀಖು ಮೊದಲು 6 ದಿವಸಗಳ ಕ್ಯಾಜುಎಲ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 18ನೇ ನವೆಂಬರ್ 1887.

ಕ್ಯಾಂಪ್ ನಂ. 1836.—ತುಮಕೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ್ ಮೆ|| ಪಿ. ಎಸ್. ಕೃಷ್ಣಮೂರ್ತಿಯವರು ಮಾಹೇ ಮಜಕೂರು 23ನೇ ಮುಕ್ಕುಂ ಲಾಗಾಯತು ಮೂರು ದಿವಸಗಳ ಕ್ಯಾಜುಎಲ್ ರಜಾ ಕೊಡಲ್ಪಟ್ಟಿರುತ್ತಾರೆ.

ಕ್ಯಾಂಪ್ ನಂ. 1838.—ಹಾಸನ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ್ ಮೆ|| ಪಿ. ಎಸ್. ಪೂರ್ಣಯ್ಯನವರಿಗೆ 1887ನೇ ಇಸವಿ ನವಂಬರ್ 24ನೇ ಮುಕ್ಕುರ ಲಾಗಾಯಿತು ಎರಡು ದಿವಸಗಳ ಕ್ಯಾಜುಎಲ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 23ನೇ ನವೆಂಬರ್ 1887.

ನಂ. 145.—ಮೈಸೂರು ಡಿಸ್ಟ್ರಿಕ್ಟ್ ನಾಗಮಂಗಲ ತಾಲ್ಲೂಕು ಅಮಲ್ದಾರ್ ಸೈದ್ ಅಹಮ್ಮದ್‌ಯವರಿಗೆ 1887ನೇ ಇಸವಿ ನವಂಬರ್ 1ನೇ ಮುಕ್ಕುಂ ಲಾಗಾಯತು 5 ದಿವಸಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 21ನೇ ನವಂಬರ್ 1887.

ಕ್ಯಾಂಪ್ ನಂಬರ್ 1867.—ಕೋಲಾರ ಡಿಸ್ಟ್ರಿಕ್ಟ್ ಪೋಲೀಸ್ ಅಸಿಸ್ಟೆಂಟ್ ಕಮ್ಮಿಷನರ್ ಮೆ|| ಜೆ. ಜಿ. ನಾರ್ತ್‌ಯವರಿಗೆ, ಅವರು ಉಪಯೋಗಿಸಿಕೊಂಡ ತಾರೀಖು ಲಾಗಾಯತು ಮೂರು ದಿವಸಗಳ ಕ್ಯಾಜುಎಲ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 11ನೇ ನವಂಬರ್ 1887.

ನಂ. .—ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೇಯಲ್ಲಿ ನಮೂದಿಸಿವ ಪ್ರಕಾರ) ಜೋಡೀ ವ ಕಾಯಂಗುತ್ತಾದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸವೆಂಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ವ.ಕಾಯಂಗುತ್ತಾ ಗ್ರಾಮಗಳು ಇದರಡೀಕಂಡ ತಖ್ತೇಯಲ್ಲಿ ನಮೂದಿರುವ ಸ್ಥಳಗಳಲ್ಲೂ ವ ತಾರೀಖುಗಳಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಷುರುವಾಗಿ ಉಳಿಕೆಯಾವದೂ ಇಲ್ಲದೇ ಗ್ರಾಮಗಳು ಚೆಡ ದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕೀಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತೀ ಮಾಡದೇ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತೀ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ್ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ತ್ಯಾರಿಂದ ರುಜೂ ಮಾಡಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮನ್ಸೂಕೂಫ್ ಮಾಡಲ್ಪಡತಕ್ಕದ್ದು. ಪರಂತು, ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮ್ಮಾಗಿರುವದಿಲ್ಲವು.

8. ಕ್ರಯದಾರನು ಕ್ರಯಕ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೇ ಗ್ರಾಮವು ಅತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯೂಟಿ ಕಮ್ಮಿಷನರವರಿಂದ ರುಜೂ ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಅತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜಾ ಬೀಜವರೀ ವಿಷಯದಲ್ಲಾಗಲಿ ಇರುವ ಗಲ್ಲತ್‌ಗಳಿಗೆ ಸರ್ಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ್ ಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟಿರುತ್ತೆ.

ಡಿಸ್ಟ್ರಿಕ್ಟು.	ತಾಲ್ಲೂಕು.	ಜೋಡೀ.	ಗ್ರಾಮ.	ಜೋಡೀದಾರ್ ವ ಕಾಯಂಗುತ್ತಾದಾರರ ಹೆಸರು.	ಅಂದಾಜು ಬೀಜವರೀ.	ಅಂದಾಜು ಹುಟ್ಟುವಳೀ ಯಾ ಪೇರೀಜು.	ಸಾಲೀಯಾನಾ ಸರ್ಕಾರಕ್ಕೆ ಕೊಡಬೇಕಾದ ಪ್ಯೆಟ್ ರೆಂಟ್.	ಯಾವ ಬಾಕೀಗೋಸ್ಕರ ಗ್ರಾಮಗಳು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕೀ.	ಹರಾಜು ತಾರೀಖು ವಗೈರೆ.
					ಖಂ. ಕೂ. ಪ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕೋಲಾರ.	ಚಿಂತಾಮಣಿ ತಾಲ್ಲೂಕು ಕೋಲಾರ ಡಿಸ್ಟ್ರಿಕ್ಟು.	ಜೋಡೀ ಪಾಪನಹಳ್ಳಿ	ಪಿಲೇರ್ಮೋಸಾಬರವಗ ಫಕರುದ್ದೀನ್		15 0 0	14 12 9	12 0 0	41 6 6	1887ನೇ ಇಸವಿ ಡಿಸಂಬರ್ 19ರಲ್ಲು ತಾಲ್ಲೂಕು ಕಛೇರೀಯಲ್ಲಿ ಅವಲ್ದಾರ್ರರೂಬರು.
		ಜೋಡೀ ಸಾಂಬಾಪುರ	ಕಾರಂಜಿ ರಾಮಾಚಾರಿ		20 15 3½	100 0 0	21 4 0	50 14 3	ಡಿಟೋ 20 ಡಿಟೋ.
		ಕಾಯಂಗು ತ್ತಾ ಬ್ರಾಹ್ಮಣಗದ್ದೆ	ನೀಲಕಂಠಶಾಸ್ತ್ರಿ		4 10 8	11 14 9	11 14 9	66 1 8	ಡಿಟೋ 19 ಡಿಟೋ.

ತಾರೀಖು 25ನೇ ನವೆಂಬರ್ 1887.

ಸಂ. —ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೇಯಲ್ಲಿ ನಮೂದಿಸಿದ ಪ್ರಕಾರ) ಜೋಡೀ ವ ಕಾಯಂಗುತ್ತಾದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಫ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ವ ಕಾಯಂಗುತ್ತಾ ಗ್ರಾಮಗಳು ಇದರಡೀಕಂಡ ತಖ್ತೇಯಲ್ಲಿ ನಮೂದಿರುವ ಸ್ಥಳಗಳಲ್ಲೂ ವ ತಾರೀಖುಗಳಲ್ಲೂ ಬಹಿರಂಗವಾದ ಹರಾಜುಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಳಿಗ್ಗೆ 11 ಘಂಟೆಗೆ ಹರಾಜು ಶುರುವಾಗಿ ಉಳಿಕೆ ಯಾವದೂ ಇಲ್ಲದೇ ಗ್ರಾಮಗಳು ಚಡ ಬಖಾಸ್ತುದಾರರಿಗೆ ಹರಾಜ್ ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕೀಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತೀ ಮಾಡದೇ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ, ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತೀ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಮಾಡಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುಖ್ತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುಖ್ತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ತ್ಯಸ್ಥರಿಂದ ರುಜೂ ಮಾಡಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕು ಇಲ್ಲೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ಯಾ ಇತರ ಖರ್ಚುಗಳು ಸೇರಿದ್ದಲ್ಲಿ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮುಕ್ತಾಯ ಮಾಡಲ್ಪಡತಕ್ಕದ್ದು. ಪರಂತು, ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೇ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ರುಜೂ ಮೊಹರ್ ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಆದೇಲ್ನಲ್ಲಾಗಲಿ ಅಂದಾಜು ಬೀಜವರೀ ವಿಷಯದಲ್ಲಾಗಲಿ ಇರುವ ಗಲ್ಲತಿಗಳಿಗೆ ಸರ್ಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಸತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ ಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಆಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಆಪ್ಪೀಲ್ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ಒಳಪಟ್ಟು ಯಿರುತ್ತೆ.

ತಿಪ್ಪಸ್ತು ತಾಲ್ಲೂಕು.	ಜೋಡೀ ನಂಬರ್.	ಗ್ರಾಮ.	ಜೋಡೀ ವ ಕಾಯಂಗುತ್ತಾದಾರರ ಹೆಸರು.	ಅಂದಾಜು ಬೀಜವರೀ.	ಅಂದಾಜು ಹುಟ್ಟುವಳೀ ಯಾಡಬೇರೀಜು.	ಸಾನಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕೀಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕೀ.	ಹರಾಜು ತಾರೀಖು ವಗೈರೆ.
				ಎ. ಸೆಂ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕೊಲ್ಲಾರ. ತಾಲೂಕು.	೨೮	ಕೊಲ್ಲಾರ.	ಜೋಡೀ ಬಾ ಪಿ. ವಾಸುದೇವಾಚಾರಿ ಮತ್ತು ಸೊಂಣಾಚಾರಿ ಮಕ್ಕಳು ಗೋರು ಹಳ್ಳಿ	151 48	80 0 0	65 10 8	684 13 4 ಮತ್ತು ಬಡ್ಡಿ.	ಸ್ರ್ 1888ನೇ ಇಸವಿ ಜನವರೀ ತಾರೀಖು 6ರಲ್ಲು ತಾಲ್ಲೂಕು ಕಛೇರಿಯಲ್ಲಿ ಅವರ್ಡಾಗುವದು.
				ಖಂ. ಕೂ. ಪ.				
			ಕಾಯಂಗು ತ್ತಾ ಚೆಂದ್ರಶೇಖರಪ್ಪ ವಗೈರೆ	23 15 8¼	139 5 6	99 8 5	441 14 3 ಮತ್ತು ಬಡ್ಡಿ	

ಬಮೋಜೀಬ್ ಹುಕ್ಕುಂ,
ಆರ್. ವಿಜಯೀಂದ್ರರಾವ್,
ಜೀಫ್ ಸೆಕ್ರೆಟರಿ.